ದಿನಾಂಕಃ **03-09-2022** ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಹೆಚ್ ಸಿ ಆರ್ ವಕೀಲರಿಂದಃ

15. ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಸಲ್ಲಿಸಿರುವ ಅಂಶಗಳನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಹೇಳಿರುವ ಅಂಶಗಳೆಲ್ಲಾ ಸತ್ಯವಾಗಿರುತ್ತದೆ ಹಾಗೂ ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ದಾವೆಗೆ ಸಂಬಂಧಿಸಿದಂತೆ ಈ ಕೆಳಗಿನ ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

1.ನಮ್ಮ ಕುಟುಂಬಕ್ಕೆ ಸಂಬಂಧಪಟ್ಟಿರುವ ವಂಶವೃಕ್ಷ ಪ್ರಮಾಣ ಪತ್ರವನ್ನು ನಿಪಿ -1 ಎಂದು ಗುರುತಿಸಲಾಯಿತು.

2. ಸರ್ವೆ ನಂ.1/2, ಸರ್ವೆ ನಂ. 1/6, ಸರ್ವೆ ನಂ. 1/9 ಎ, ಸರ್ವೆ ನಂ. 15/4 ಬಿ ಗೆ ಸಂಬಂಧಪಟ್ಟಿರುವ ಆರ್ ಟಿ ಸಿ ಗಳನ್ನು ನಿಪಿ-2 ರಿಂದ 5 ಎಂದು ಗುರುತಿಸಲಾಯಿತು.

6. ದಾವಾ ಸ್ವತ್ತಿಗೆ ಸಂಬಂಧಪಟ್ಟಿರುವ ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ನನ್ನ ಪರವಾಗಿ ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

ಶ್ರೀ ಹೆಚ್ ಬಿ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು
ತಿಪಟೂರು.